ಇ) ಬೆಳಗಾಂ ಜಿಲ್ಲಾಧಿಕಾರಿಗಳು ಬೈಲಹೊಂಗಲ ಮತಕ್ಷೇತ್ರಕ್ಕೆ 12.22 ಲಕ್ಷ ರೂ. ಬಿಡುಗಡೆ ಮಾಡಿರುವರು. ಅದರಲ್ಲಿ 77,250.00ರೂ. ಹಣ ಖರ್ಚು ಮಾಡಲಾಗಿದೆ.

ಈ) ಬಂದಿಲ್ಲ.

ಉ) ಉದ್ಭವಿಸುವುದಿಲ್ಲ

ಚನ್ನಪಟ್ಟಣ ನಗರಕ್ಕೆ ಅಗ್ನಿಶಾಮಕ ಠಾಣೆ ಮಂಜೂರಾತಿ.

73 - ಶ್ರೀ.ಸಾದತ್ ಆಲಿಖಾನ್ (ಚನ್ನಪಟ್ಟಣ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1990ರಲ್ಲಿ ನಡೆದ ಕೋಮು ಗಲಭೆಗಳ ಸಮಯದಲ್ಲಿ ಹಿಂದಿನ ಮುಖ್ಯಮಂತ್ರಿಗಳು ಚನ್ನಪಟ್ಟಣಕ್ಕೆ ಭೇಟಿ ನೀಡಿದಾಗ, ಚನ್ನಪಟ್ಟಣದಲ್ಲಿ ಒಂದು ಅಗ್ನಿ ಶಾಮಕ ಠಾಣೆಯನ್ನು ಮಂಜೂರು ಮಾಡುವುದಾಗಿ ಭರವಸೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮೇಲಿನ ಪ್ರಸ್ತಾವನೆಯು ಸರ್ಕಾರದಲ್ಲಿ ಮೂರು ವರ್ಷಗಳಿಂದ ಬಾಕಿ ಉಳಿದಿರುವುದು ನಿಜವೇ?

ಇ) ಚನ್ನಪಟ್ಟಣ ಕೃಷಿ ಉತ್ಪನ್ನ ಮಾರುಕಟ್ಟೆಯ ಪ್ರಾಂಗಣದಲ್ಲಿ ಅಗ್ನಿಶಾಮಕ ಠಾಣೆಯನ್ನು ಕಟ್ಟಲು ಜಮೀನನ್ನು ಕಾಯ್ದಿರಿಸಿರುವುದು ನಿಜವೇ? ಹಾಗೂ ಇದನ್ನು ಹಿಂದಿನ ಅಗ್ನಿಶಾಕ ಇಲಾಖೆಯ ಡೈರೆಕ್ಟರ್ ಜನರಲ್ ರವರು ಒಪ್ಪಿದ್ದರೇ?

ಈ) ಇದನ್ನು ಯಾವಾಗ ಮಂಜೂರು ಮಾಡಲಾಗುವುದು ಮತ್ತು ಯಾವಾಗ ನಿರ್ಮಾಣ ಕೆಲಸವನ್ನು ತೆಗೆದುಕೊಳ್ಳಲಾಗುವುದು?

ಶ್ರೀ ಎಂ.ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಕೃಷಿ ಉತ್ಪನ್ನ ಮಾರುಕಟ್ಟೆಯು 24 ಗುಂಟೆ ಜಮೀನನ್ನು ನೀಡುವುದಾಗಿ ತಿಳಿಸಿತ್ತು. ಆದರೆ ಇದು ಅಗ್ನಿ ಶಾಮಕ ಠಾಣೆ ಸ್ಥಾಪನೆಗೆ ಸಾಕಾಗುವುದಿಲ್ಲ. ಮತ್ತು ಸೂಕ್ತವಾಗಿಲ್ಲ.

1991ರಲ್ಲಿ ಸರ್ಕಾರವು ಚನ್ನಪಟ್ಟಣ ಹಾಗೂ ರಾಮನಗರ ಎರಡು ನಗರಗಳಿಗೆ ಸೇವಾ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ ಒಂದು ಅಗ್ನಿ ಶಾಮಕ ಠಾಣೆಯನ್ನು ಮಂಜೂರು ಮಾಡಿದೆ. ಸದ್ಯದಲ್ಲಿ ಸದರಿ ಅಗ್ನಿಶಾಮಕ ಠಾಣೆಯು ಚಿನ್ನಪಟ್ಟಣದ ಪೊಲೀಸ್ ತರಬೇತಿ ಶಾಲೆಯಲ್ಲಿ ಒದಗಿಸಲಾದ ತಾತ್ಕಾಲಿಕ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ರಾಮನಗರದ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಎರಡು ಎಕರೆ ಜಮೀನನ್ನು ಒದಗಿಸಿದೆ. ಈ ಜಮೀನು ಅಗ್ನಿಶಾಮಕ ಠಾಣೆಯನ್ನು ಸ್ಥಾಪಿಸಲು ಸೂಕ್ತವೂ ಮತ್ತು ಸಾಕಷ್ಟಿದ್ದು, ಇದು ಚನ್ನಪಟ್ಟಣ ಮತ್ತು ರಾಮನಗರ ಎರಡೂ ಪಟ್ಟಣಗಳಿಗೆ ಸೇವಾ ಸೌಲಭ್ಯವನ್ನು ಒದಗಿಸುತ್ತದೆ.

ಚನ್ನಪಟ್ಟಣ ಟೌನ್ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಸೀಮೆಎಣ್ಣೆ ಅಭಾವ.

74 - ಶ್ರೀ ಸಾದತ್ ಆಲಿ ಖಾನ್, (ಚನ್ನಪಟ್ಟಣ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚನ್ನಪಟ್ಟಣದ ಟೌನ್ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಒಂದು ವರ್ಷದಿಂದ ಸೀಮೆಎಣ್ಣೆಯ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?